# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-11042/21-22

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 29/10/2021

**ಕಛೇರಿ ಆದೇಶ**

ವಿಷಯ: ಶ್ರೀ ಡಿ. ಕೆ. ಮಧುಸೂದನ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: ಶ್ರೀ ಡಿ. ಕೆ. ಮಧುಸೂದನ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ರವರ ಮನವಿ ದಿನಾಂಕ: 11-08-2021

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಡಿ. ಕೆ. ಮಧುಸೂದನ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು; ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪ್ರಧಾನ ಅಭಿಯಂತರರ ಕಛೇರಿಯಲ್ಲಿ ತಾಂತ್ರಿಕ ಸಹಾಯಕರಾಗಿ ಕಾರ್ಯನಿರ್ವಹಿಸುತ್ತಿರುವ ಇವರು ಉಲ್ಲೇಖಿತದಂತೆ ಮನವಿ ಸಲ್ಲಿಸಿ ತಮ್ಮ ನಿಯೋಜನಾ ಅವಧಿಯು ಪೂರ್ಣಗೊಂಡಿರುವುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವುದನ್ನು ಪರಿಗಣಿಸಿ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆ ಬರುವಂತೆ ಕೆಳಕಂಡ ಷರತ್ತಿಗೊಳಪಡಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ ಮಾತೃ ಇಲಾಖೆಗೆ ಹಿಂದಿರುಗಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿ ಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮೆಟ್, ಗುರುತಿನಚೀಟಿ (Identity Card) ಹಾಗೂ ಲ್ಯಾಪ್‌ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

(signature) 29/10/21
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

28/10/2021   29/10/21

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂ.ರವರಿಗೆ ಕಳುಹಿಸಿದೆ
: ನಿರ್ದೇಶಕರು (ಆಡಳಿತ ಮತ್ತು ಮಾ.ಸಂ), ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು ರವರಿಗೆ ಕಳುಹಿಸಿದೆ.
: ಪ್ರಧಾನ ಅಭಿಯಂತರರು ರವರಿಗೆ ಕಳುಹಿಸಿದೆ.
: ಮಾಹಿತಿತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಮು.ಲೆ.ಅ / ಮು.ಲೆ.ಪ ರವರಿಗೆರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

J. T. Ady   15/11   18/11/21